# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1298 |
| ಮಾನ್ಯ ಸದಸ್ಯರ ಹೆಸರು | ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 17.12.2025 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಂದಾಯ ಇಲಾಖೆಯ ಅಧೀನದಲ್ಲಿ ಬರುವ ಭೂಮಾಪನ ಮತ್ತು ಭೂದಾಖಲೆಗಳ ಇಲಾಖೆಯಲ್ಲಿ ಭೂಮಾಪಕರ ಕೊರತೆಯಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಭೂಮಾಪನ ಇಲಾಖೆಯ 750 (364+386) ಭೂಮಾಪಕರ ಹುದ್ದೆಗಳನ್ನು ಭರ್ತಿ ಮಾಡಿಕೊಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿ, ಕರ್ನಾಟಕ ಲೋಕಸೇವಾ ಆಯೋಗವು 750 ಭೂಮಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಅಧಿಸೂಚನೆಯನ್ನು ಹೊರಡಿಸಿ, ತದನಂತರ ನೇರ ನೇಮಕಾತಿ ಮಾಡುವಾಗ ಸರ್ಕಾರದ ಒಳ ಮೀಸಲಾತಿ ನೀತಿಯನ್ನು ಅನುಷ್ಠಾನಗೊಳಿಸುವ ಕಾರಣದಿಂದ, ಹೊರಡಿಸಲಾಗಿದ್ದ ಅಧಿಸೂಚನೆಯನ್ನು ರದ್ದುಗೊಳಿಸಿರುತ್ತದೆ.<br><br>ಮುಂದುವರೆದು, ಭೂಮಾಪಕರುಗಳ ನೇರ ನೇಮಕಾತಿಗಾಗಿ ಪ್ರಥಮ ಬಾರಿಗೆ ಕೈಗೊಂಡ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದ 264 ಉಳಿಕೆ ಮೂಲ ವೃಂದದ ಮತ್ತು 100 ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದ ಹುದ್ದೆಗಳು ಸೇರಿದಂತೆ ಒಟ್ಟು 364 ಭೂಮಾಪಕರ ಹುದ್ದೆಗಳಿಗೆ ದಿನಾಂಕ:29-02-2024 ರಂದು ಆಯೋಗದಿಂದ ಹೊರಡಿಸಿರುವ ನೇಮಕಾತಿ ಅಧಿಸೂಚನೆಯಂತೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ಕೈಗೊಂಡು, ನೇಮಕಾತಿಯ ಎಲ್ಲಾ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿ ಆಯ್ಕೆ ಪಟ್ಟಿ ನೀಡಲು ಮತ್ತು ದಿನಾಂಕ:22-11-2024ರ ಸೇರ್ಪಡೆ ಅಧಿಸೂಚನೆಯಲ್ಲಿನ 296 ಉಳಿಕೆ ಮೂಲ ವೃಂದದ ಮತ್ತು 90 |
| ಆ) | ಬಂದಿದ್ದಲ್ಲಿ, ಇದರಿಂದಾಗಿ ಸಾರ್ವಜನಿಕರಿಗೆ ತೊಂದರೆ ಯಾಗುತ್ತಿದ್ದು ಹಾಗೂ ಕೊರತೆ ಯಾಗುತ್ತಿದ್ದು, ಕೊರತೆಯಿರುವ ಭೂಮಾಪಕರ ನೇಮಕಾತಿಗೆ ಸರ್ಕಾರ ಕೈಗೊಂಡಿರುವ ಕ್ರಮವೇನು; | |
| ಇ) | ಯಾವ ಕಾಲಮಿತಿಯಲ್ಲಿ ಕೊರತೆಯಿರುವ ಭೂಮಾಪಕರ ನೇಮಕಾತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು; | |
| ಈ) | ಎಷ್ಟು ಭೂಮಾಪಕರ ನೇಮಕಾತಿಯನ್ನು ಮಾಡಲು ಸರ್ಕಾರ ಉದ್ದೇಶಿಸಿದೆ; ಇಲ್ಲದಿದ್ದಲ್ಲಿ, ಭೂಮಾಪಕರ ಕೊರತೆಯಿಂದ ರೈತರು ಮತ್ತು ಸಾರ್ವಜನಿಕರಿಗೆ ತೊಂದರೆ ಅನುಭವಿಸುತ್ತಿರುವುದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು? | |

| | | |
|---|---|---|
| | | ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದ ಹುದ್ದೆಗಳು ಸೇರಿದಂತೆ ಒಟ್ಟು 386 ಭೂಮಾಪಕರ ಹುದ್ದೆಗಳ ನೇರ ನೇಮಕಾತಿಗೆ ಹೊಸದಾಗಿ ಅಧಿಸೂಚನೆ ಹೊರಡಿಸಿ, ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ, ಆಯ್ಕೆ ಪಟ್ಟಿಯನ್ನು ಪ್ರತ್ಯೇಕವಾಗಿ ಪ್ರಕಟಿಸುವಂತೆ ಕರ್ನಾಟಕ ಲೋಕಸೇವಾ ಆಯೋಗವನ್ನು ಕೋರಲಾಗಿದ್ದು, ನೇಮಕಾತಿ ಪ್ರಕ್ರಿಯೆಯು ಪರಿಶೀಲನೆಯಲ್ಲಿರುತ್ತದೆ.<br><br>ಕರ್ನಾಟಕ ಲೋಕ ಸೇವಾ ಆಯೋಗವು ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ ನಂತರ, ಆಯ್ಕೆಗೊಂಡ ಅಭ್ಯರ್ಥಿಗಳ ದಾಖಲೆಗಳನ್ನು ಪರಿಶೀಲಿಸಿ ನೇಮಕಾತಿಗೊಂಡ ಭೂಮಾಪಕರುಗಳನ್ನು ವಿವಿಧ ಭೂಮಾಪನ ಕಛೇರಿಗಳಿಗೆ ಸ್ಥಳ ನಿಯುಕ್ತಿಗೊಳಿಸಲಾಗುತ್ತದೆ. |

**ಸಂಖ್ಯೆ: ಕಂಇ 232 ಎಸ್ಎಸ್ಸಿ 2025**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು